ಕರ್ನಾಟಕ ಸರ್ಕಾರ

ಸಂಖ್ಯೆ: ಕಾಶಿಇ/ಹೆಚ್.ಆರ್.ಎಂ.ಎಸ್/07/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು. ದಿನಾಂಕ: 24/04/2023

**ಸುತ್ತೋಲೆ**

ವಿಷಯ: ಹೆಚ್.ಆರ್.ಎಂ.ಎಸ್-1 ತಂತ್ರಾಂಶದ ಸೇವಾವಹಿ ಭಾಗದಲ್ಲಿ ಅಧಿಕಾರಿ/ನೌಕರರ ಎಲ್ಲಾ ಸೇವಾ ವಿವರಗಳನ್ನು ಅಪ್‌ಡೇಟ್ ಮಾಡುವ ಕುರಿತು.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ 4 ಸನಿತಿ 2023 ದಿನಾಂಕ: 17/03/2023

*****

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ. ಕರ್ನಾಟಕ ರಾಜ್ಯ ಸರ್ಕಾರದ ಸೇವೆಗೆ ಈಗಾಗಲೇ ನೇಮಕಗೊಂಡಿರುವ ಹಾಗೂ ಇನ್ನು ಮುಂದೆ ನೇಮಕಗೊಳ್ಳುವ ಎಲ್ಲಾ ಸರ್ಕಾರಿ ಅಧಿಕಾರಿ / ನೌಕರರ ಸೇವಾ ವಿವರಗಳನ್ನು ಹೆಚ್.ಆರ್.ಎಂ.ಎಸ್-2.0 ಯೋಜನೆಯ ಭಾಗವಾದ ವಿದ್ಯುನ್ಮಾನ ಸೇವಾ ವಹಿ (Electronic Service Register - ESR) ನಲ್ಲಿಯೇ ಅನುಷ್ಠಾನಗೊಳಿಸಲು ಸರ್ಕಾರದಿಂದ ಆದೇಶಗಳನ್ನು ಹೊರಡಿಸಲಾಗಿದ್ದು. ಇದರ ಭಾಗವಾಗಿ ಪ್ರಸ್ತುತ ಹೆಚ್.ಆರ್.ಎಂ.ಎಸ್ ತಂತ್ರಾಂಶದಲ್ಲಿ ಲಭ್ಯವಿರುವ ಸರ್ಕಾರಿ ಅಧಿಕಾರಿ / ನೌಕರರ ಸೇವಾ ವಿವರಗಳನ್ನು ESR ಗೆ ವರ್ಗಾಯಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹಾಗೂ <u>ಸದರಿ ಮಾಹಿತಿಯನ್ನು ವರ್ಗಾಯಿಸಿದ ನಂತರ ESR ನಲ್ಲಿ ಯಾವುದೇ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲವೆಂದು</u> ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಲಾಗಿರುತ್ತದೆ.

ಆದುದರಿಂದ ಹೆಚ್.ಆರ್.ಎಂ.ಎಸ್ ತಂತ್ರಾಂಶದಲ್ಲಿ ಲಭ್ಯವಿರುವ ತಮ್ಮ ಕಛೇರಿ / ಕಾಲೇಜಿನ ಎಲ್ಲಾ ಸರ್ಕಾರಿ ಅಧಿಕಾರಿ / ನೌಕರರುಗಳ ಸೇವಾ ವಹಿಯ (Departmental Exams, Probationary period clearance details, Increment/Promotion details, leave details, training details, suspension details if employee is or was under suspension, disciplinary details, transfer details etc.,) ಪೂರ್ಣ ಮಾಹಿತಿಯನ್ನು ಈ ಕೂಡಲೇ ಪರಿಶೀಲಿಸಿ. ತಪ್ಪುಗಳಿದ್ದಲ್ಲಿ ಸರಿಪಡಿಸಿಕೊಳ್ಳುವಂತೆ ಈ ಮೂಲಕ ಇಲಾಖಾ ವ್ಯಾಪ್ತಿಯ ಎಲ್ಲಾ ಪ್ರಾದೇಶಿಕ ಕಛೇರಿ / ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಕಟ್ಟುನಿಟ್ಟಾದ ಸೂಚನೆ ನೀಡಲಾಗಿದೆ. ಸೇವಾ ವಿವರಗಳನ್ನು ಒಳಗೊಂಡಂತೆ ಹೆಚ್.ಆರ್.ಎಂ.ಎಸ್ ತಂತ್ರಾಂಶದಲ್ಲಿ ಎಲ್ಲಾ ಸರ್ಕಾರಿ ಅಧಿಕಾರಿ / ನೌಕರರುಗಳ ವೈಯಕ್ತಿಕ ಮಾಹಿತಿಗಳನ್ನು (Name, designation, date of birth, pay scale, group, date of entry into service, updation of GER number for gazetted employees, PAN number updation, Residential Address, Contact Number, Marital Status, Spouse Details, Qualification details, Family and dependant

details along with correct date of birth, home town details, Nominee details etc., ) ಗಳನ್ನು ಸಹ ಪರಿಶೀಲಿಸಿ. ತಪ್ಪಿದಲ್ಲಿ ಸರಿಪಡಿಸಲು ಅಗತ್ಯ ಕ್ರಮ ಕೈಗೊಳ್ಳುವುದು.

ಅಡಕ: ಉಲ್ಲೇಖಿತ ಸರ್ಕಾರದ ಸುತ್ತೋಲೆ

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:-

1. ಕಾಲೇಜು ಶಿಕ್ಷಣ ಇಲಾಖೆ ವ್ಯಾಪ್ತಿಗೊಳಪಡುವ ಎಲ್ಲಾ ಪ್ರಾದೇಶಿಕ ಜಂಟಿನಿರ್ದೇಶಕರುಗಳು ಹಾಗೂ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:

1. ಸರ್ಕಾರದ ಕಾರ್ಯದರ್ಶಿಗಳು (ಆ&ಸಂ). ಆರ್ಥಿಕ ಇಲಾಖೆ. ಕರ್ನಾಟಕ ಸರ್ಕಾರದ ಸಚಿವಾಲಯ. ವಿಧಾನಸೌಧ. ಬೆಂಗಳೂರು 560001 - ಮಾಹಿತಿಗಾಗಿ
2. ಮಾಹಿತಿ ಅಧಿಕಾರಿಗಳು. ಕಾಲೇಜು ಶಿಕ್ಷಣ ಆಯುಕ್ತರವರ ಕಛೇರಿ. ಬೆಂಗಳೂರು - ವೆಬ್‌ಸೈಟ್‌ನಲ್ಲಿ ಸುತ್ತೋಲೆಯನ್ನು ಪ್ರಕಟಿಸಲು.
3. ಕಛೇರಿ ಪ್ರತಿ.

HRMS 06 APR 2023

**ಕರ್ನಾಟಕ ಸರ್ಕಾರ**

ಸಂಖ್ಯೆ: ಆಇ 4 ಸನಿತಿ 2023

5=SC113
15/CH/2023.

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 17.03.2023.

**ಸುತ್ತೋಲೆ**

ವಿಷಯ: ಹೆಚ್‌ಆರ್‌ಎಂಎಸ್-1 ತಂತ್ರಾಂಶದ ಸೇವಾವಹಿ ಭಾಗದಲ್ಲಿ ಅಧಿಕಾರಿ/ನೌಕರರ ಎಲ್ಲಾ ಸೇವಾ ವಿವರಗಳನ್ನು ಅಪ್‌ಡೇಟ್ ಮಾಡುವ ಕುರಿತು.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಆಇ 3 ಸನಿತಿ 2021, ಬೆಂಗಳೂರು, ದಿನಾಂಕ: 18.09.2021.
2. ಸರ್ಕಾರದ ಆದೇಶ ಸಂಖ್ಯೆ: ಆಇ 4 ಸನಿತಿ 2022, ಬೆಂಗಳೂರು, ದಿನಾಂಕ: 12.10.2022.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಹೆಚ್.ಆರ್.ಎಂ.ಎಸ್-2.0 ತಂತ್ರಾಂಶವನ್ನು ಅನುಷ್ಠಾನಗೊಳಿಸುವ ಸಂಬಂಧ ಹೆಚ್.ಆರ್.ಎಂ.ಎಸ್-2.0 ತಂತ್ರಾಂಶದ ಅಂಗವಾದ ವಿದ್ಯುನ್ಮಾನ ಸೇವಾ ವಹಿ (Electronic Service Register -ESR) ಯನ್ನು ಸಿದ್ಧಪಡಿಸಲಾಗಿದೆ. ಈ ಹಿನ್ನೆಲೆಯಲ್ಲಿ, ಉಲ್ಲೇಖ(1)ರ ಸರ್ಕಾರಿ ಆದೇಶದಲ್ಲಿ 2021-22ನೇ ಸಾಲಿನಿಂದ ಸರ್ಕಾರಿ ಸೇವೆಗೆ ಸೇರ್ಪಡೆಗೊಳ್ಳುವ ಎಲ್ಲಾ ಅಧಿಕಾರಿ/ನೌಕರರುಗಳ ಸೇವಾ ವಹಿಯನ್ನು ಹೆಚ್‌ಆರ್‌ಎಂಎಸ್-2.0 ಯೋಜನೆಯ ಭಾಗವಾಗಿರುವ ವಿದ್ಯುನ್ಮಾನ ಸೇವಾ ವಹಿ (ESR) ನಲ್ಲಿಯೇ ಅನುಷ್ಠಾನಗೊಳಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಎಲ್ಲಾ ಸಕ್ಷಮ ಪ್ರಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. ಹಾಗೂ ಉಲ್ಲೇಖ(2)ರ ಆದೇಶದಲ್ಲಿ ಹೆಚ್.ಆರ್.ಎಂ.ಎಸ್-1.0 ತಂತ್ರಾಂಶದಲ್ಲಿನ ಸೇವಾ ವಹಿ ಭಾಗದಲ್ಲಿ ದಾಖಲಾಗಿರುವ ರಾಜ್ಯದ ಎಲ್ಲಾ ಸರ್ಕಾರಿ ಅಧಿಕಾರಿ/ನೌಕರರ ಸೇವಾ ವಿವರಗಳ ಮಾಹಿತಿಗಳನ್ನು "ವಿದ್ಯುನ್ಮಾನ ಸೇವಾ ವಹಿ (ESR)" ಗೆ ವರ್ಗಾಯಿಸಲು ಕ್ರಮ ಕೈಗೊಳ್ಳಲು ಹಾಗೂ ಕರ್ನಾಟಕ ರಾಜ್ಯ ಸರ್ಕಾರದ ಸೇವೆಗೆ ಈಗಾಗಲೇ ನೇಮಕಗೊಂಡಿರುವ ಹಾಗೂ ಇನ್ನು ಮುಂದೆ ನೇಮಕಗೊಳ್ಳುವ ಎಲ್ಲಾ ಸರ್ಕಾರಿ ಅಧಿಕಾರಿ/ನೌಕರರ ಸೇವಾ ವಿವರಗಳನ್ನು ಹೆಚ್.ಆರ್.ಎಂ.ಎಸ್ – 2.0 ತಂತ್ರಾಂಶದ "ವಿದ್ಯುನ್ಮಾನ ಸೇವಾ ವಹಿ" ಯಲ್ಲಿಯೇ ದಾಖಲಿಸಿ ನಿರ್ವಹಿಸಲು ಆದೇಶಿಸಲಾಗಿದೆ.

ಅದರಂತೆ, ಹೆಚ್‌ಆರ್‌ಎಂಎಸ್-1 ತಂತ್ರಾಂಶದ ಸೇವಾವಹಿ ಭಾಗದಲ್ಲಿ ಅಧಿಕಾರಿ/ನೌಕರರ ಮಾಹಿತಿಯು ಲಭ್ಯವಿದ್ದು, ಸದರಿ ಮಾಹಿತಿಯನ್ನು ಹೆಚ್‌ಆರ್‌ಎಂಎಸ್-2 ಯೋಜನೆಯ ಭಾಗವಾಗಿರುವ ವಿದ್ಯುನ್ಮಾನ ಸೇವಾ ವಹಿ (ESR) ಗೆ ವರ್ಗಾಯಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಸದರಿ ಮಾಹಿತಿಯನ್ನು ವರ್ಗಾಯಿಸಿದ ನಂತರ ESR ನಲ್ಲಿ ಯಾವುದೇ ತಿದ್ದುಪಡಿ ಮಾಡುವ ಅವಕಾಶವಿರುವುದಿಲ್ಲ. ಆದುದರಿಂದ ಹೆಚ್‌ಆರ್‌ಎಂಎಸ್-1 ತಂತ್ರಾಂಶದಲ್ಲಿ ಲಭ್ಯವಿರುವ ತಮ್ಮ ಇಲಾಖೆಯ ಎಲ್ಲಾ ಸರ್ಕಾರಿ ಅಧಿಕಾರಿ/ನೌಕರರುಗಳ ಸೇವಾ ವಹಿಯ ಪೂರ್ಣ ಮಾಹಿತಿಯನ್ನು ಈ ಕೂಡಲೇ ಪರಿಶೀಲಿಸಿ, ಸರಿಪಡಿಸಲು ತಮ್ಮ ಅಧೀನದಲ್ಲಿನ ಎಲ್ಲಾ ಇಲಾಖಾ ಮುಖ್ಯಸ್ಥರನ್ನು ಮತ್ತು ಇಲಾಖಾ ಕಾರ್ಯದರ್ಶಿಗಳನ್ನು ಕೋರಿದೆ.

(ಡಾ. ಏಕ್‌ರೂಪ್ ಕೌರ್) 17/3
ಸರ್ಕಾರದ ಕಾರ್ಯದರ್ಶಿ (ಆ&ಸಂ)
ಆರ್ಥಿಕ ಇಲಾಖೆ

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯನ್ನು ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.